## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1220 (1400)**
ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 16.03.2026
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿನ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಜ್ಯೋತಿ ಸಂಜೀವಿನಿ ಸೌಲಭ್ಯವನ್ನು ನೀಡುವ ಆಲೋಚನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವ ಕಾಲಮಿತಿಯಲ್ಲಿ ಸೌಲಭ್ಯವನ್ನು ನೀಡಲಾಗುವುದು; | ಅನುದಾನಿತ ಶಾಲೆಗಳ ಶಿಕ್ಷಕರಿಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 ರ ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಿಬ್ಬಂದಿ, ನೇಮಕಾತಿ, ಸೇವಾ ಷರತ್ತು ನಿಯಮಗಳು 1999 ರ ಅನೆಕ್ಸರ್-2 ಷರತ್ತು (3) ರಂತೆ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯ ನೀಡಲು ಅವಕಾಶವಿರುವುದಿಲ್ಲ. ಈ ಹಿನ್ನಲೆಯಲ್ಲಿ ಅನುದಾನಿತ ಶಾಲಾ ಶಿಕ್ಷಕರಿಗೆ ಜ್ಯೋತಿ ಸಂಜೀವಿನಿ ಸೌಲಭ್ಯವನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಆ) | ರಾಜ್ಯದಲ್ಲಿನ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ತಮ್ಮ Salary Slip ಅನ್ನು ಸರ್ಕಾರಿ ನೌಕರರಂತೆ ನೇರವಾಗಿ ಸ್ವತಃ ಪಡೆಯುವಂತೆ ಅವಕಾಶ ಮಾಡಿಕೊಡದೇ ಇರಲು ಕಾರಣವೇನು; ಈ ಸೌಲಭ್ಯವನ್ನು ಸದರಿಯವರಿಗೆ ನೀಡುವ ಬಗ್ಗೆ ಸರ್ಕಾರದ ನಿಲುವೇನು; | ಸರ್ಕಾರಿ ನೌಕರರಿಗೆ ಇರುವ ಸೌಲಭ್ಯವನ್ನು ಅನುದಾನಿತ ಶಿಕ್ಷಣ ಸಿಬ್ಬಂದಿಗಳಿಗೆ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ) | ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಜೀವ ವಿಮೆಯ ಕಂತನ್ನು HRMS ನಿಂದ ಕಡಿತಗೊಳಿಸಿ ಸರ್ಕಾರಿ ನೌಕರರಂತೆ ಇವರಿಗೂ ಕೂಡಾ ನೇರವಾಗಿ HRMS ನಿಂದ LIC ಸಂಸ್ಥೆಗೆ ವರ್ಗಾವಣೆಯಾಗುವಂತೆ ಅವಕಾಶ ಮಾಡಿಕೊಡಬಹುದಲ್ಲವೇ; ಈ ಬಗ್ಗೆ ಇಲಾಖೆ ಕೈಗೊಳ್ಳಬಹುದಾದ ಕ್ರಮಗಳೇನು; | |

6

--2

| | | |
|---|---|---|
| ಈ) | ಇಲಾಖೆಯು ಸರ್ಕಾರಿ ನೌಕರರಿಗೆ ನೀಡಲು ಇಚ್ಛಿಸಿರುವ ESR (Electronic Service Record) ವ್ಯವಸ್ಥೆಯನ್ನು ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೂ ಅನ್ವಯಿಸುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | ಸರ್ಕಾರಿ ನೌಕರರಿಗೆ ಇರುವ ಸೌಲಭ್ಯವನ್ನು ಅನುದಾನಿತ ಶಿಕ್ಷಣ ಸಿಬ್ಬಂದಿಗಳಿಗೆ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

*ಸಂಖ್ಯೆ:ಇಪಿ 86 ಎಸ್‌ಇಎಸ್ 2026*

**(ಎಸ್. ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.